ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	265
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	09.12.2020
ಉತ್ತರಿಸುವ ಸಚಿವರು	:	ಕಂದಾಯ ಸಚಿವರು

	ಪ್ರಶ್ನೆ	ಉತ್ತರ
(ಅ)	ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದಂತೆ ಎಸ್.ಸಿ/ಎಸ್.ಟಿ ಗಳಿಗೆ ನೀಡಲಾದ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ, ಈ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ನಿವೇಶನಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಜಮೀನಿನ ವಿಸ್ತೀರ್ಣವೇನು;	ಎಸ್.ಸಿ/ಎಸ್.ಟಿ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿರುವುದಿಲ್ಲ. ಆದರೆ ಅವಶ್ಯಕವಿದ್ದಲ್ಲಿ ಸರ್ಕಾರದಿಂದ ಪೂರ್ವಾನುಮತಿ ಪಡೆಯಬೇಕಾಗಿರುತ್ತದೆ. ಬೀದರ್ ನಗರದ ಕುಂಬಾರವಾಡ ಸರ್ವೆ ನಂ.35ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ರವರು ವಿಚಾರಣೆಯನ್ನು ಕೈಗೊಂಡಿರುತ್ತಾರೆ.
(ಆ)	ಬೀದರ್ ನಗರದ ಕುಂಬಾರವಾಡ ಸರ್ವೆ ಸಂಖ್ಯೆ: 35ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಹಿಂದಿನ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಈ ಹಿಂದೆ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಇಲ್ಲಿಯವರೆಗೆ ತನಿಖೆ ನಡೆಸದಿರಲು ಕಾರಣಗಳೇನು;	
(ಇ)	ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಗೆ ತುತ್ತಾದ ಜಮೀನು ಎಷ್ಟು; ಸಂತ್ರಸ್ಥರಿಗೆ ಪರಿಹಾರ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು?	ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಯಿಂದ ಒಟ್ಟು 249507 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಈ ಪೈಕಿ ಒಟ್ಟು 73073 ರೈತರಿಗೆ ರೂ.43.17 ಕೋಟಿ ಪರಿಹಾರ ನೀಡಲಾಗಿರುತ್ತದೆ. ಮುಂದುವರೆದು, ಪರಿಹಾರ ನೀಡುವ ಕಾರ್ಯ ಪ್ರಗತಿಯಲ್ಲಿದೆ.

ಸಂಖ್ಯೆ: ಕಂಇ 13 ಎಲ್‌ಆರ್‌ಎಸ್ 2020

(ಆರ್. ಅಶೋಕ)
ಮಾನ್ಯ ಕಂದಾಯ ಸಚಿವರು